# ಕರ್ನಾಟಕ ವಿಧಾನ ಪರಿಷತ್ತು

**ಲಘು ಪ್ರಕಟಣೆ ಭಾಗ –2**

**(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)**

**ಮಂಗಳವಾರ, ದಿನಾಂಕ:01ನೇ ಮಾರ್ಚ್, 2025**

ಸಂಖ್ಯೆ: **10**

## ಪರಿಷ್ಕೃತ

ವಿಧಾನಸಭೆ ಸಚಿವಾಲಯದ ವತಿಯಿಂದ ವಿಧಾನಸೌಧದ ಆವರಣದಲ್ಲಿ ದಿನಾಂಕ:27.02.2025 ರಿಂದ 03.03.2025ರವರೆಗೆ **"ಪುಸ್ತಕ ಮೇಳ"**ವನ್ನು ಆಯೋಜಿಸಲಾಗಿರುತ್ತದೆ. ಇದರ ಅಂಗವಾಗಿ ಪುಸ್ತಕ ಪ್ರದರ್ಶನ ಮತ್ತು ಮಾರಾಟ ಹಾಗೂ ವಿವಿಧ ವಿಷಯಗಳ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿರುತ್ತದೆ. ಮಾನ್ಯ ಶಾಸಕರುಗಳು ಈ ಪುಸ್ತಕ ಮೇಳದಲ್ಲಿ ತಮ್ಮ ಕ್ಷೇತ್ರದ ವ್ಯಾಪ್ತಿಯ ಗ್ರಂಥಾಲಯಗಳಿಗೆ ಉಪಯುಕ್ತ ಪುಸ್ತಕಗಳನ್ನು ಖರೀದಿಸಲು ಕರ್ನಾಟಕ ಶಾಸಕರ ಪ್ರದೇಶಭಿವೃದ್ಧಿ ನಿಧಿಯಿಂದ ರೂ.2.00 ಲಕ್ಷಗಳ ಮೊತ್ತವನ್ನು ಭರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ಆದುದರಿಂದ, ದಿನಾಂಕ:27.02.2025 ರಿಂದ 03.03.2025ರವರೆಗೆ ನಡೆಯುವ ಪುಸ್ತಕ ಮೇಳದ ಅಂಗವಾಗಿ ಪ್ರತಿ ದಿನ ಬೆಳಗ್ಗೆ 11.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ವಿವಿಧ ವಿಷಯಗಳ ಸಂವಾದ ಕಾರ್ಯಕ್ರಮಗಳನ್ನು ಹಾಗೂ ಸಂಜೆ 5.00 ಗಂಟೆಯ ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳು ಭಾಗವಹಿಸಬೇಕೆಂದು ಈ ಮೂಲಕ ಕೋರಲಾಗಿದೆ.

ಕೆ. ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ.

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳಿಗೆ.